# ಕುವೆಂಪು ವಿಶ್ವವಿದ್ಯಾಲಯ

*ಸಿಂಡಿಕೇಟ್ ಅಸಾಮಾನ್ಯ (ಘಟಿಕೋತ್ಸವ) ಸಭೆಯ*

# ನಡಾವಳಿಗಳು

## ಸಭಾ ದಿನಾಂಕ : 21-07-2023


**ಪ್ರಾಧಿಕಾರಗಳ ವಿಭಾಗ**

ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451
ಶಿವಮೊಗ್ಗ ಜಿಲ್ಲೆ.

ಫ್ಯಾಕ್ಸ್: 08282-256262
ಇ-ಮೇಲ್ :drsyndicateku@gmail.com

☎ 08282-256148 (ಪ್ರಾಧಿಕಾರಗಳ ವಿಭಾಗ)
ವೆಬ್‌ಸೈಟ್ :www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ, ಶಂಕರಘಟ್ಟ- 577 451

ಸಂಖ್ಯೆ: ಕುವಿ:ಯುಎಟಿ-I:ಸಿಂ-33ಫ:01: 255 :2023-24 ದಿನಾಂಕ:01-08-2023

ಮಾನ್ಯರೆ,

ವಿಷಯ: ದಿನಾಂಕ:21-07-2023 ರಂದು ನಡೆದ ಸಿಂಡಿಕೇಟ್ ಅಸಾಮಾನ್ಯ (ಘಟಿಕೋತ್ಸವ) ಸಭೆಯ ನಡಾವಳಿಗಳು.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ - 2000ರ ಪ್ರಕರಣ - 29(w)ರ ಪ್ರಕಾರ ರಚಿಸಲಾಗಿರುವ/ ಅನುಸರಿಸಲಾಗುತ್ತಿರುವ ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು - ಅಧ್ಯಾಯ-I ರ ಪ್ರಕರಣ- 03 ರನ್ವಯ ದಿನಾಂಕ:21-07-2023 ರಂದು ವಿಶ್ವವಿದ್ಯಾಲಯದ ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಭವನದಲ್ಲಿ ನಡೆದ ಸಿಂಡಿಕೇಟ್ ಅಸಾಮಾನ್ಯ (ಘಟಿಕೋತ್ಸವ) ಸಭೆಯ ನಡಾವಳಿಗಳನ್ನು ಈ ಮೂಲಕ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು - ಅಧ್ಯಾಯ-Iರ ಪ್ರಕರಣ - 22 ರ ಪ್ರಕಾರ ಸದರಿ ನಡಾವಳಿಗಳು ತಲುಪಿದ **12 ದಿನಗಳೊಳಗೆ ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ** ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

**ವಿ.ಸೂ.: ಸದರಿ ನಡಾವಳಿಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಯಥಾವತ್ತಾಗಿ ಪ್ರಕಟಿಸಲಾಗಿದೆ.**

ತಮ್ಮ ವಿಶ್ವಾಸಿ,

ಕುಲಸಚಿವರು
ಕುವೆಂಪು ವಿಶ್ವವಿದ್ಯಾಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಗೆ,

ಮಾನ್ಯ ಸಿಂಡಿಕೇಟ್ ಸದಸ್ಯರುಗಳಿಗೆ.

ಪ್ರತಿಗಳು:

1) ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯಗಳು ಬಹುಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು.
3) ಆಯುಕ್ತರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
4) ಕುಲಸಚಿವರು(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
5) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
6) ನಿಕಾಯಗಳ ಡೀನರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
7) ಗ್ರಂಥಪಾಲಕರು, ವಿಶ್ವವಿದ್ಯಾಲಯ ಗ್ರಂಥಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8) ನಿರ್ದೇಶಕರು, ಐ.ಕ್ಯೂ.ಎ.ಸಿ./ಪಿ.ಎಂ.ಇ/ ಸಿ.ಡಿ.ಸಿ/ ಶಾರೀರಿಕ ಶಿಕ್ಷಣ/ ವಿದ್ಯಾರ್ಥಿ ಕ್ಷೇಮಪಾಲನ/ ಪ್ರಸಾರಾಂಗ/ ದೂರ ಶಿಕ್ಷಣ ನಿರ್ದೇಶನಾಲಯ ವಿಭಾಗ, ಮಹಿಳಾ ಅಧ್ಯಯನ ಕೇಂದ್ರ, ಯು.ಸಿ.ಸಿ.ಎಫ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9) **ನಿರ್ದೇಶಕರು / ಜ್ಯೂನಿಯರ್ ಕಂಪ್ಯೂಟರ್ ಪ್ರೊಗ್ರಾಮರ್, ಯು.ಸಿ.ಸಿ.ಎಫ್. ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ - ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಸಿಂಡಿಕೇಟ್ ಸಭೆಯ ನಡಾವಳಿಯನ್ನು ಸೇರ್ಪಡಿಸುವುದು.**
10) ಎಲ್ಲಾ ಅಧ್ಯಕ್ಷರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ ಕಡೂರು/ ಚಿಕ್ಕಮಗಳೂರು.
11) ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರುಗಳು/ ಶಾಖಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ಕಡೂರು.
12) ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಕಾಲೇಜು / ಸಹ್ಯಾದ್ರಿ ವಿಜ್ಞಾನ ಕಾಲೇಜು/ ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು, ಶಿವಮೊಗ್ಗ.
13) ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಬಿ.ಹೆಚ್ ರಸ್ತೆ ಕಡೂರು.
14) ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐ.ಡಿ.ಎಸ್.ಜಿ ಕಾಲೇಜು ಕಟ್ಟಡ, ಕುವೆಂಪು ವಿಶ್ವವಿದ್ಯಾಲಯ, ಚಿಕ್ಕಮಗಳೂರು.
15) ಸಂಚಾಲಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಘಟಕ/ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕ, ವಿದ್ಯಾರ್ಥಿಗಳ ಉತ್ತೇಜನ ಸೇವಾ ಕೇಂದ್ರ, ವಿದ್ಯಾರ್ಥಿಗಳ ಸೌಲಭ್ಯ ಸಮುಚ್ಛಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
16) ಕಾರ್ಯಪಾಲಕ ಅಭಿಯಂತರರು, ಇಂಜಿನಿಯರಿಂಗ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
17) ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
18) ಆಪ್ತಕಾರ್ಯಾಲಯ ಕುಲಪತಿಗಳು: ಕುಲಸಚಿವರು: ಕುಲಸಚಿವರು(ಮೌಲ್ಯಮಾಪನ):ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
19) ಕಛೇರಿ ಪ್ರತಿ / ರಕ್ಷಣಾ ಕಡತ.

# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:21–07–2023ರಂದು ಶುಕ್ರವಾರ ಅಪರಾಹ್ನ 2.30 ಗಂಟೆಗೆ "ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ" ಇಲ್ಲಿ ನಡೆದ ಸಿಂಡಿಕೇಟ್ ಅಸಾಮಾನ್ಯ (ಘಟಿಕೋತ್ಸವ) ಸಭೆ"ಯ ನಡಾವಳಿಗಳು.

**ಹಾಜರಾದ ಸದಸ್ಯರು:**

| | | |
|---|---|---|
| 1. | ಪ್ರೊ. ಬಿ.ಪಿ. ವೀರಭದ್ರಪ್ಪ, ಕುಲಪತಿಗಳು | ಅಧ್ಯಕ್ಷರು |
| 2. | ಪ್ರೊ. ಗೀತಾ ಸಿ. ಕುಲಸಚಿವರು (ಪ್ರಭಾರ) | ಸದಸ್ಯ ಕಾರ್ಯದರ್ಶಿ |
| 3. | ಪ್ರೊ. ನವೀನ್‌ಕುಮಾರ್ ಎಸ್.ಕೆ., ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 4. | ಡಾ. ವಿಷ್ಣುಮೂರ್ತಿ ಕೆ.ಎ., ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯದ ಆಯುಕ್ತರ ಪ್ರತಿನಿಧಿ | ಸದಸ್ಯರು |
| 5. | ಪ್ರೊ. ಗೀತಾ ಸಿ. ಡೀನರು, ಶಿಕ್ಷಣ ನಿಕಾಯ | ಸದಸ್ಯರು |
| 6. | ಶ್ರೀ ಶಾಂತಕುಮಾರ್, ಜಿ.ಎಸ್ | ಸದಸ್ಯರು |
| 7. | ಶ್ರೀ ಶಶಿಧರ, ಬಿ.ಎನ್ | ಸದಸ್ಯರು |
| 8. | ಡಾ. ಎಂ. ಸ್ವಾಮಿ., ಪ್ರಾಂಶುಪಾಲರು. | ಸದಸ್ಯರು |
| 9. | ಶ್ರೀ ವಿನಯ್‌ಕುಮಾರ್ ಶೆಟ್ಟಿ., ಪ್ರಾಂಶುಪಾಲರು | ಸದಸ್ಯರು |
| 10. | ಡಾ. ಎ.ಟಿ. ಪದ್ಮೇಗೌಡ., ಪ್ರಾಂಶುಪಾಲರು. | ಸದಸ್ಯರು |
| 11. | ಡಾ. ಸಂಧ್ಯಾ ಕಾವೇರಿ ಕೆ., ಪ್ರಾಂಶುಪಾಲರು | ಸದಸ್ಯರು |
| 12. | ಪ್ರೊ. ಚಂದ್ರಶೇಖರ್ ಕೆ | ಸದಸ್ಯರು |

**ಗೈರುಹಾಜರಾದ ಸದಸ್ಯರು:**

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 2. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 3. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 4. | ಆಯುಕ್ತರು, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |

**ಪ್ರಸ್ತಾವನೆ:** ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು ಆತ್ಮೀಯವಾಗಿ ಸ್ವಾಗತ ಕೋರಿದರು. ಮಾನ್ಯ ಕುಲಪತಿಯವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಘನತೆವೆತ್ತ ಕುಲಾಧಿಪತಿಗಳ ಅನುದಮೋದನೆ ಮೇರೆಗೆ ವಿಶ್ವವಿದ್ಯಾಲಯದ 33ನೇ ಘಟಿಕೋತ್ಸವವನ್ನು ದಿನಾಂಕ:22–07–2023 ರಂದು ಏರ್ಪಡಿಸಿದೆ. ಕುಲಾಧಿಪತಿಗಳಾದ ಶ್ರೀ ಥಾವರ್‌ಚಂದ್ ಗೆಹ್ಲೋಟ್‌ರವರು ಅಗ್ರಾಸನ ವಹಿಸಲಿದ್ದು, ಉನ್ನತಶಿಕ್ಷಣ ಸಚಿವರೂ ಹಾಗೂ ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ. ಸುಧಾಕರ್‌ರವರು ಉಪಸ್ಥಿತರಿರುವರು. ಪದ್ಮಭೂಷಣ ಮತ್ತು ಪದ್ಮಶ್ರೀ ಪುರಸ್ಕೃತ ಡಾ.ಸುರೇಶ್, ಬಿ.ಎನ್., ರವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಘಟಿಕೋತ್ಸವದಲ್ಲಿ ಪಿ.ಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಪದವಿ ಪಡೆಯುವ ಅಭ್ಯರ್ಥಿಗಳ ಪಟ್ಟಿಯನ್ನು ಅನುಮೋದನೆಗಾಗಿ ಈ ವಿಶೇಷ ಸಿಂಡಿಕೇಟ್ ಸಭೆಯನ್ನು ಕರೆಯಲಾಗಿದೆ ಎಂದರು. ಮುಂದುವರೆದು ಮಾತನಾಡಿದ ಅವರು, ಕುವೆಂಪು ವಿಶ್ವವಿದ್ಯಾಲಯವು ಕಳೆದ ನಾಲ್ಕು ದಶಕಗಳಲ್ಲಿ ಶೈಕ್ಷಣಿಕ ಮತ್ತು ಸಂಶೋಧನಾ ಚಟುವಟಿಕೆಗಳಲ್ಲಿ ದೇಶ ವಿದೇಶಗಳಲ್ಲಿ ಉತ್ತಮ ಹೆಸರು ಗಳಿಸಿದೆ. ದೇಶ ಮತ್ತು ವಿದೇಶಗಳ ಹಲವಾರು ಶೈಕ್ಷಣಿಕ ಸಂಸ್ಥೆಗಳು ಮತ್ತು ಉದ್ಯಮಗಳೊಂದಿಗೆ ಶೈಕ್ಷಣಿಕ ಒಪ್ಪಂದಗಳನ್ನು ಮಾಡಿಕೊಂಡಿದ್ದು, ಇದು ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ಅನುಕೂಲವಾಗುತ್ತಿದೆ ಎಂದರು.

## ಪರೀಕ್ಷಾ ವಿಭಾಗ

**2023–ಸಿಂ–33ಫ:01:** ವಿಶ್ವವಿದ್ಯಾಲಯದ 33ನೇ ವಾರ್ಷಿಕ ಘಟಿಕೋತ್ಸವದಲ್ಲಿ ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ಹಾಗೂ ಇತರೆ ಪದವಿಗಳಿಗೆ ಅರ್ಹರಾದ ವಿದ್ಯಾರ್ಥಿಗಳ/ ಅಭ್ಯರ್ಥಿಗಳ ಪಟ್ಟಿ ಅನುಮೋದನೆ ಬಗ್ಗೆ.

**ಚರ್ಚೆ:** ಕುಲಸಚಿವ (ಮೌಲ್ಯಮಾಪನ)ರವರು ಮಾತಾಡುತ್ತಾ, ವಿಶ್ವವಿದ್ಯಾಲಯದ 33ನೇ ವಾರ್ಷಿಕ ಘಟಿಕೋತ್ಸವದಲ್ಲಿ ಮೂವರು ಗಣ್ಯರಿಗೆ ಗೌರವ ಡಾಕ್ಟರೇಟ್ ನೀಡಲು ಘನತೆವೆತ್ತ ಕುಲಾಧಿಪತಿಗಳು ಅನುಮೋದನೆ ನೀಡಿದ್ದಾರೆ ಎಂಬ ಮಾಹಿತಿ ನೀಡುತ್ತಾ, ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಮಾಹಿತಿಯನ್ನು ಸಭೆಗೆ ವಿವರಿಸಿ, ಪಟ್ಟಿಗೆ ಅನುಮೋದನೆ ನೀಡುವಂತೆ ಕೋರಿದರು.

**ನಿರ್ಣಯ:** ಚರ್ಚೆಯ ನಂತರ 33ನೇ ವಾರ್ಷಿಕ ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಸಭೆಯು ಅನುಮೋದಿಸಿತು.

ಕೊನೆಯಲ್ಲಿ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಘನತೆವೆತ್ತ ಕುಲಾಧಿಪತಿಗಳಿಂದ ನಾಮನಿರ್ದೇಶಿತ ಸದಸ್ಯರುಗಳಾದ ಶ್ರೀ ಶಾಂತಕುಮಾರ್, ಜೆ.ಎಸ್ ಮತ್ತು ಶ್ರೀ ಶಶಿಧರ, ಬಿ. ಎನ್., ಇವರುಗಳನ್ನು ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರಾಗಿ ನೇಮಕಗೊಂಡಿರುವ ಡಾ. ವಿಷ್ಣುಮೂರ್ತಿ ಕೆ.ಎ. ಇವರುಗಳನ್ನು ಆತ್ಮೀಯವಾಗಿ ಸ್ವಾಗತಿಸಿ ಸನ್ಮಾನಿಸಲಾಯಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯ ಕಲಾಪಗಳು ಮುಕ್ತಾಯವಾದವು.

ಕುಲಸಚಿವರು
ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಸಹಿ/
ಕುಲಪತಿಗಳು